(ಊ) ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2010
ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಸುರೇಶ್ ಕುಮಾರ್(ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್.ಸುರೇಶ್ ಕುಮಾರ್(ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–IX)
(ಗೊಂದಲ)

(ಋ) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2010
ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ.ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.